# ನಾಗೇಗೌಡನ ದೊಡ್ಡಿ ಗ್ರಾಮವು ಆದರ್ಶ ಗ್ರಾಮ ಯೋಜನೆಯಡಿ ಅಭಿವೃದ್ಧಿ: ಸಂಸದೆ ಸುಮಲತಾ ಅಂಬರೀಶ್

**ಮಳವಳ್ಳಿ:** ತಾಲೂಕಿನ ಆದರ್ಶ ಗ್ರಾಮವಾದ ನಾಗೇಗೌಡನ ದೊಡ್ಡಿಯಲ್ಲಿ ಸಂಸದೆ ಸುಮಲತಾ ಅಂಬರೀಶ್‌ರವರು ಅಭಿವೃದ್ಧಿ ಕುರಿತು ಗ್ರಾಮಸ್ಥರಲ್ಲಿ ಸಭೆ ನಡೆಸಿದರು.

ನಾಗೇಗೌಡನ ದೊಡ್ಡಿ ಗ್ರಾಮವು ಆದರ್ಶ ಗ್ರಾಮ ಯೋಜನೆಯಡಿ ಅಭಿವೃದ್ಧಿ ಹೊಂದುತ್ತಿರುವುದು ತುಂಬಾ ಸಂತಸ ತಂದಿದೆ. ಮೂಲಭೂತ ಸೌಕರ್ಯಗಳಿಗೆ ಹೆಚ್ಚಿನ ಒತ್ತು ನೀಡಿದ್ದೇನೆ ಎಂದು ಗ್ರಾಮದ ಜನರನ್ನು ಉದ್ದೇಶಿಸಿ ಮಾತನಾಡಿದರು.

ಶಾಸಕ ನರೇಂದ್ರ ಸ್ವಾಮಿ ನಾಗೇಗೌಡನ ದೊಡ್ಡಿ ಗ್ರಾಮವು ಆದರ್ಶ ಗ್ರಾಮ ಯೋಜನೆ ರೂಪಿಸಿರುವ ಸಂಸದರಿಗೆ ನಾನು ಕೃತಜ್ಞತೆ ಸಲ್ಲಿಸುತ್ತೇನೆ. ಗ್ರಾಮದ ಜನರು ಸರ್ಕಾರದ ಯೋಜನೆಗಳನ್ನು ಸದ್ಬುಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ನಾಗೇಗೌಡನ ದೊಡ್ಡಿ ಗ್ರಾ ಪಂ



ಅಧ್ಯಕ್ಷರಾದ ಚೆಲುವಮ್ಮ ಗ್ರಾಪಂ ಸದಸ್ಯರು ಗ್ರಾಮಸ್ಥರು ಚಿಕ್ಕಲಿಂಗಯ್ಯ ಪಾಲ್ಗೊಂಡಿದ್ದರು.

# "2ನೇ ವಿಶ್ವ ಕನ್ನಡ ಹಬ್ಬ"ಕ್ಕೆ ಇಸ್ರೋ ವಿಜ್ಞಾನಿ ಎ.ಎಸ್ ಕಿರಣ್ ಕುಮಾರ್ ಆಗಮನ

**ಬೆಂಗಳೂರು:** ಡಾ. ಆಲೂರು ಸೀಳಿನ್ ಕಿರಣ್ ಕುಮಾರ್ ಭಾರತೀಯ ಬಾಹ್ಯಾಕಾಶ ಸಂಶೋಧನೆ ಸಂಸ್ಥೆಯ (ಇಸ್ರೊ) ಅಧ್ಯಕ್ಷ ಹುದ್ದೆ ಹಾಗೂ ಬಾಹ್ಯಾಕಾಶ ಸಂಸ್ಥೆಯ ಕಾರ್ಯದರ್ಶಿ ಹುದ್ದೆ ನಿಭಾಯಿಸಿದ ವಿಜ್ಞಾನಿಯಾಗಿದ್ದಾರೆ. ಜನವರಿ 12, 2015 ರಿಂದ ಜನವರಿ 2018ರ ವರೆಗೆ ಭಾರತೀಯ ಬಾಹ್ಯಾಕಾಶ ಸಂಶೋಧನಾ ಕೇಂದ್ರದ ಅಧ್ಯಕ್ಷರಾಗಿದ್ದರು. ಈ ಹುದ್ದೆ ನಿರ್ವಹಿಸಿದ ಎರಡನೇ ಕನ್ನಡಿಗ ಹಾಗೆಯೇ ಚಂದ್ರಯಾನ –3 ಯಶಸ್ವಿಗೆ ಇವರ ಪಾತ್ರ ಕೂಡ ಬಹುಮುಖ್ಯವಾಗಿದ್ದು, ಇಂತಹ ಮಹನೀಯರನ್ನು ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ಅಧ್ಯಕ್ಷರಾದ ಶಿವಕುಮಾರ್ ನಾಗರನವಿಲೆ ಹಾಗೂ ಪದಾಧಿಕಾರಿಗಳು ಭೇಟಿ ಮಾಡಿ ಸಿಂಗಾಪುರದಲ್ಲಿ ಆಯೋಜನೆ ಮಾಡಿರುವ "ಎರಡನೇ ವಿಶ್ವಕನ್ನಡ ಹಬ್ಬ"ಕ್ಕೆ ಆಗಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಅಧ್ಯಕ್ಷರು ಕಾರ್ಯಕ್ರಮದ ಸಂಪೂರ್ಣ ರೂಪುರೇಷೆಗಳನ್ನು ವಿವರಿಸಿದರು. ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸಲ್ಲಿಸಿರುವ ಸಾಧನೆಗಳಿಗೆ ಮಾನ್ಯ ಶ್ರೀ ಎ.ಎಸ್ ಕಿರಣ್ ಕುಮಾರ್ ಸರ್ ರವರು ಸಂತಸದ ಜೊತೆಗೆ ಮೆಚ್ಚುಗೆ ವ್ಯಕ್ತಪಡಿಸಿ, ಕಾರ್ಯಕ್ರಮಕ್ಕೆ ಆಗಮಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಕಿಶೋರ್ ಕುಮಾರ್. ಬಿ. ಎನ್, ಕಲಾನವೀನ್, ಮಂಜುಳಾ ಪಾವಗಡ ಹಾಗೂ ಜೀವನ್ ಬಸವರಾಜ್ ರವರು ಜೊತೆಗಿದ್ದರು.





# 'ಎನ್.ಪಿ.ಸಿ.ಐ ಮ್ಯಾಪಿಂಗ್ ಕಡ್ಡಾಯ ಮಾಡಿಸಿ'



**ಕನಕಪುರ:** ಸರ್ಕಾರದ ವಿಧವಾ ವೇತನ, ಸಂಧ್ಯಾ ಸುರಕ್ಷಾ ವೇತನ, ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಅಂಗವಿಕಲ ವೇತನ, ಮನಸ್ವಿನಿ ಮತ್ತು ಮೈತ್ರಿ ಯೋಜನೆಗಳ ಅಡಿಯಲ್ಲಿ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳು ತಾವು ಯಾವ ಬ್ಯಾಂಕ್ ಅಥವಾ ಅಂಚೆ ಕಚೇರಿ ಮುಖಾಂತರ ಪಿಂಚಣಿ ಪಡೆಯುತ್ತಿರುವರೋ ಆ ಬ್ಯಾಂಕುಗಳಿಗೆ ಎನ್.ಪಿ.ಸಿ.ಐ ಮ್ಯಾಪಿಂಗ್ ಕಡ್ಡಾಯವಾಗಿ ಮಾಡಿಸಬೇಕಿದ್ದು, ತಪ್ಪಿದ್ದಲ್ಲಿ ಮುಂದಿನ ದಿನಗಳಲ್ಲಿ ತಮ್ಮ ಪಿಂಚಣಿ ಹಣವು ನಿಂತುಹೋಗುವ ಸಂಭವವಿದೆ ಎಂದು ತಾಲ್ಲೂಕು ತಹಸೀಲ್ದಾರ್ ಡಾ.ಸ್ಮಿತಾರಾಮು ತಿಳಿಸಿದ್ದಾರೆ.

# ಎನ್‌ಪಿಎಸ್ ಪ್ರಿಫರೆನ್ಸ್ ಇಂಡೆಕ್ಸ್ ಬಿಡುಗಡೆ

**ಬೆಂಗಳೂರು:** ಭಾರತದ ಪ್ರಮುಖ ಪಿಂಚಣಿ ನಿಧಿ ನಿರ್ವಾಹಕ ಕಂಪನಿಗಳ ಪೈಕಿ ಒಂದಾದ ಎಚ್‌ಡಿಎಫ್‌ಸಿ ಪೆನ್ಶನ್, ರಾಷ್ಟ್ರೀಯ ಪಿಂಚಣಿ ವ್ಯವಸ್ಥೆ (ಎನ್‌ಪಿಎಸ್) ಬಳಸಿಕೊಂಡು ರಿಟೈರ್‌ಮೆಂಟ್ ಪ್ಲಾನಿಂಗ್ ಕುರಿತು ಭಾರತದ ಗ್ರಾಹಕರ ಜಾಗೃತಿ ಮೂಡಿಸುವ ವಿಚಾರದಲ್ಲಿ ಮುಂಚೂಣಿಯಲ್ಲಿದೆ.

ಅಕ್ಟೋಬರ್ 1 ರಂದು ಎನ್‌ಪಿಎಸ್ ದಿವಸ್ ಎಂದು ಆಚರಿಸಲ್ಪಡುತ್ತದೆ. ಆ ದಿನಕ್ಕೆ ಹೊಂದಿಕೆಯಾಗುವಂತೆ, ಎಚ್‌ಡಿಎಫ್‌ಸಿ ಪೆನ್ಶನ್ ಮೊದಲ ಮಾದರಿಯ ಎನ್‌ಪಿಎಸ್ ಪ್ರಿಫರೆನ್ಸ್ ಇಂಡೆಕ್ಸ್ ಅನ್ನು ಬಿಡುಗಡೆ ಮಾಡಿದೆ. ಅದು ವಿವಿಧ ಗ್ರಾಹಕ ಗುಂಪುಗಳಲ್ಲಿ ಎನ್‌ಪಿಎಸ್‌ನ ಆದ್ಯತೆಯನ್ನು ಎತ್ತಿ ತೋರಿಸುತ್ತದೆ.

ಎನ್‌ಪಿಎಸ್ ಎನ್ನುವುದು ಸರ್ಕಾರಿ ಬೆಂಬಲಿತ ನಿವೃತ್ತಿ ಉಳಿತಾಯ ಕಾರ್ಯಕ್ರಮವಾಗಿದ್ದು, ಭಾರತದ ನಾಗರಿಕರಿಗೆ ಅವರ ನಿವೃತ್ತಿ ಬದುಕಿಗೆ ಆರ್ಥಿಕ ಭದ್ರತೆಯನ್ನು ಒದಗಿಸುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ. 18–70 ವರ್ಷ ವಯಸ್ಸಿನ ಯಾವುದೇ ಭಾರತೀಯ ನಾಗರಿಕರು ಸ್ವಯಂ ಪ್ರೇರಣೆಯಿಂದ ಎನ್‌ಪಿಎಸ್‌ಗೆ ಸಬ್‌ಸ್ಕ್ರೈಬ್ ಆಗಬಹುದು.

ಗ್ರಾಹಕರ ಆದಾಯದ ಮಟ್ಟವನ್ನು ಹೆಚ್ಚಿಸುವುದರ ಜೊತೆಗೆ ಎನ್‌ಪಿಎಸ್ ಪ್ರಾಶಸ್ತ್ಯ ಸೂಚ್ಯಂಕವು ಸುಧಾರಿಸುತ್ತದೆ. ಇತರ ಪ್ರದೇಶಗಳಿಗೆ ಹೋಲಿಸಿದರೆ ಉತ್ತರ ಪ್ರದೇಶವು ಅತಿ ಹೆಚ್ಚು ಎನ್‌ಪಿಎಸ್ ಪ್ರಾಶಸ್ತ್ಯ ಸೂಚ್ಯಂಕವನ್ನು (57) ಹೊಂದಿದೆ.

■ ಫುಯೆಲ್ ಸಂಸ್ಥಾಪನಾ ದಿನಾಚರಣೆಯಲ್ಲಿ

# 90 ಅರ್ಹ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನ ವಿತರಣೆ



**ಬೆಂಗಳೂರು:** ಕೌಶಲ್ಯ ಶಿಕ್ಷಣ, ವೃತ್ತಿಪರ ತರಬೇತಿ ಮತ್ತು ಉದ್ಯೋಗದ ಬೆಂಬಲದ ಮೂಲಕ ಸಮಾಜದ ಹಿಂದುಳಿದ ಸಮುದಾಯದ ಯುವಕರನ್ನು ಸಬಲೀಕರಣಗೊಳಿಸಲು ಮೀಸಲಾಗಿರುವ ಲಾಭರಹಿತ ಸಂಸ್ಥೆ ಫುಯೆಲ್(ಫ್ರೆಂಡ್ಸ್ ಯೂನಿಯನ್ ಫಾರ್ ಎನರ್ಜೈಸಿಂಗ್ ಲೈವ್ಸ್) 17ನೇ ಸಂಸ್ಥಾಪನಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿತು. ಈ ವಿಶೇಷ ದಿನದಂದು 90 ಬಡ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನವನ್ನು ವಿತರಿಸುವ ಮೂಲಕ ಫುಯೆಲ್ ಜನರ ಜೀವನವನ್ನು ಸುಧಾರಿಸುವ ತನ್ನ ಬದ್ಧತೆಯನ್ನು ಪುನರುಚ್ಚರಿಸಿತು.

ಈ ಸಮಾರಂಭದ ಪ್ರಮುಖ ಅಂಶವೆಂದರೆ ಭವಿಷ್ಯದ ಕೌಶಲ್ಯ ಶೃಂಗಸಭೆ. ಈ ಶೃಂಗಸಭೆಯಲ್ಲಿ ಹೆಸರಾಂತ ಉದ್ಯಮಿಗಳು ಮತ್ತು ನೀತಿ ನಿರೂಪಕರು ಭಾಗವಹಿಸಿದ್ದರು. ಭವಿಷ್ಯದ ಪ್ರತಿಭೆಗಳು, ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿಯಲ್ಲಿ ಸಿಎಸ್ ಆರ್ ನ ನಾವೀನ್ಯತೆಯನ್ನು ಪರಿಶೀಲಿಸಿತು.

ಮಹಾರಾಷ್ಟ್ರ ವಿಧಾನಸಭೆಯ ಸ್ಪೀಕರ್ ರಾಹುಲ್ ನಾರ್ವೇಕರ್, ಸಮಾಜ ಸೇವಕ ಮತ್ತು ಬಿಎಂಸಿ ಕಾರ್ಪೊರೇಟರ್ ಹರ್ಷಿತಾ ನಾರ್ವೇಕರ್, ಹಿಟಾಚಿ ಏರ್ ಕಂಡೀಷನಿಂಗ್ ಇಂಡಿಯಾ ಉಪಾಧ್ಯಕ್ಷ ಕರ್ನಲ್ ರಾಜೇಶ್ ಓಹೋಲ್, ಕಾರ್ಪೊರೇಟ್ ಕಮ್ಯುನಿಕೇಶನ್ಸ್ ಬಜಾಜ್ ಗ್ರೂಪ್ ಉಪಾಧ್ಯಕ್ಷ ಸಂಜಯ್ ಓಜಾ, ಇಂಟರ್ನ್ಯಾಶನಲ್ ಬ್ಯುಸಿನೆಸ್ ಸೀರಮ್ ಇನ್ಸ್ಟಿಟ್ಯೂಟ್ ಆಫ್ ಇಂಡಿಯಾ ನಿರ್ದೇಶಕ ಪರಾಗ್ ದೇಶಮುಖ್, ಎಲ್ ಟಿಐ ಮೈಂಡ್ ಟ್ರೀ ಚೀಫ್ ಸಸ್ಟೈನೆಬಿಲಿಟಿ ಆಫೀಸರ್ ಪನೀಶ್ ರಾವ್, ಕೇತನ್ ದೇಶಪಾಂಡೆ ಹಾಗೂ ಸಂತೋಷ್ ಹುರಲಿಕೊಪ್ಪಿ ಉಪಸ್ಥಿತರಿದ್ದರು.

# ಭವಿಷ್ಯದ ರಾಜಕಾರಣದ ಹಿತದೃಷ್ಟಿಯಿಂದ ಬಿಜೆಪಿ–ಜೆಡಿಎಸ್ ಮೈತ್ರಿ

## ಎಲ್ಲಾ ಕಹಿ ಘಟನೆಗಳನ್ನು ಮರೆತು ಮೈತ್ರಿಗೆ ಸಹಕರಿಸುವಂತೆ ಸಿ.ಪಿ.ಯೋಗೇಶ್ವರ್ ಮನವಿ

**ಚನ್ನಪಟ್ಟಣ:** ಭವಿಷ್ಯದ ರಾಜಕಾರಣದ ಹಿತದೃಷ್ಟಿಯಿಂದ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಹಿರಿಯ ನಾಯಕರು ಮೈತ್ರಿ ಮಾಡಿಕೊಂಡಿದ್ದು ತಳಮಟ್ಟದಲ್ಲೂ ನಾವೆಲ್ಲರೂ ಹೊಂದಾಗಬೇಕಾಗಿದೆ. ಕಾರ್ಯಕರ್ತರು ತಮ್ಮ ಎಲ್ಲಾ ವೈಮನಸ್ಸುಗಳನ್ನು ಮರೆತು ಮೈತ್ರಿಗೆ ಸಹಕರಿಸುವಂತೆ ಬಿಜೆಪಿ ಮುಖಂಡರು ಹಾಗೂ ವಿಧಾನ ಪರಿಷತ್ ಸದಸ್ಯರು ಆದ ಸಿ.ಪಿ.ಯೋಗೇಶ್ವರ್ ಅವರು ತಮ್ಮ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರಿಗೆ ಮನವಿ ಮಾಡಿದರು.

ನಗರದ ಹೊರವಲಯದ ಸಾತನೂರು ರಸ್ತೆಯ ಎಲ್.ಎನ್.ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಬಿಜೆಪಿ ಪಕ್ಷದ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಮುಖವಾಗಿ ಇಲ್ಲಿ ನಿಮ್ಮ ಅಭಿಪ್ರಾಯ ಮುಖ್ಯವಾಗಿದೆ. ನಾನು ರಾಜಕಾರಣಕ್ಕೆ ಬಂದಾಗಿನಿಂದಲೂ ಜೆಡಿಎಸ್ ವಿರೋಧಿಸಿಕೊಂಡೇ ಬಂದವನು. ಮೈತ್ರಿಯಿಂದ ತಳಮಟ್ಟದ ಕಾರ್ಯಕರ್ತರಿಗೆ ಇರುಸು–ಮುರಿಸು ಉಂಟಾಗಿರುವುದು ಸತ್ಯ, ನಮ್ಮ ವಿರೋಧವನ್ನೇ ಕಾಂಗ್ರೆಸ್ ಪಕ್ಷ ಲಾಭ ಮಾಡಿಕೊಂಡಿದೆ.ನನಗೆ ಹಲವು ಸೋಲು ಉಂಟಾಗಿದ್ದು ಹಿಂದಿನ ಎಲ್ಲಾ



ಕಹಿ ಘಟನೆಗಳನ್ನು ಮರೆತು ನಾವೆಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡೋಣ, ಎರಡೂ ಪಕ್ಷಗಳು ಒಂದಾದರೆ ಮಾತ್ರ ಕಾಂಗ್ರೆಸ್ ಪಕ್ಷವನ್ನು ಕಟ್ಟಿಹಾಕಲು ಮತ್ತು ಅಧಿಕಾರಕ್ಕೆ ಬಂದು ಜನ ಸೇವೆ ಮಾಡಲು ಸಾಧ್ಯವಾಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹೆಚ್.ಡಿ.ದೇವೇಗೌಡರು ಮತ್ತು ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಸದಾ ಟೀಕಿಸುತ್ತಿದ್ದ ಸಿ.ಪಿ.ಯೋಗೇಶ್ವರ್ ಅವರು ಇಂದು ಅವರನ್ನು ಹೊಗಳಿ ಗುಣಗಾಣ ಮಾಡಿ, ನೆರದಿದ್ದ ಕಾರ್ಯಕರ್ತರ ಹುಬ್ಬೇರುಂತೆ ಮಾಡಿ, ಕಾಂಗ್ರೆಸ್ ಪಕ್ಷವನ್ನು ಅಧಿಕಾರದಿಂದ ದೂರವಿಡಲು ಮತ್ತು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತ್ತೊಮ್ಮೆ ಮೋದಿಯವರು ಪ್ರಧಾನಮಂತ್ರಿ ಆಗಬೇಕೆಂದು ಜೆಡಿಎಸ್ ಪಕ್ಷ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಯಾರಿಗೆ ಟಿಕೆಟ್ ನೀಡಿದರೂ ಅವರನ್ನು ಗೆಲ್ಲಿಸಿಕೊಂಡು ಬರುವ ಜವಾಬ್ದಾರಿ ನಮ್ಮದಾಗಬೇಕಾಗಿದೆ ಎಂದು ಹೇಳಿದರು.

ರಾಜ್ಯದ ಜನರಿಗೆ ಗ್ಯಾರಂಟಿಗಳ ಭರವಸೆ ನೀಡಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ನೇತೃತ್ವದ ಸರ್ಕಾರವು ಜನ ಸಾಮಾನ್ಯರ ವಿರೋಧ ಕಟ್ಟಿಕೊಂಡಿದೆ. ಅಲ್ಲಿ ಎಲ್ಲವೂ ಸರಿಯಿಲ್ಲ. ನಾನೇ ಸೂಪರ್ ಸಿ. ಎಂ .ಎಂದು ಡಿ. ಕೆ. ಶಿವಕುಮಾರ್ ರವರು, ಸಿ ಎಂ ಸಿದ್ದರಾಮಯ್ಯನವರನ್ನು ಪಕ್ಕಕ್ಕೆ ಸರಿಸಿದ್ದಾರೆ, ಡಿ ಕೆ ಸಹೋದರರು ಕೇವಲ ಮಾತಿಗೆ ಸೀಮಿತವಾಗಿದ್ದಾರೆ, ಗ್ಯಾರಂಟಿ ಯೋಜನೆಗೆ ಸೀಮಿತವಾಗಿದ್ದು, ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಇನ್ನೆರಡು ತಿಂಗಳಲ್ಲಿ ಅಧಿಕಾರ ಕಳೆದುಕೊಳ್ಳಲಿದೆ ಎಂದು ಭವಿಷ್ಯ ನುಡಿದ ಅವರು, ಗ್ಯಾರಂಟಿ ಯೋಜನೆಗಳಿಗೆ ಮರುಳಾಗದೇ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಗೆ ಮತ ನೀಡಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಈ ದೇಶದ ಪ್ರಧಾನಿ ಮಾಡಬೇಕೆಂದು ಮನವಿ ಮಾಡಿದರು.

ಬಿಜೆಪಿ ಕಾರ್ಯಕರ್ತರ ಸಭೆಯು ಇದೇ ಮೊದಲನೇ ಬಾರಿಯಾಗಿದೆ. ಸ್ಥಳೀಯ ನಾಯಕರ ಜೊತೆಗೆ ಸಭೆ ನಡೆಸಿ, ಜೆಡಿಎಸ್ ನಾಯಕರ ಸಭೆಯ ನಂತರ ಬಿಜೆಪಿ–ಜೆಡಿಎಸ್ ನಾಯಕರ ಹಾಗೂ ಕಾರ್ಯಕರ್ತರ ಸಭೆಯನ್ನು ಆಯೋಜಿಸಲಾಗುವುದು.

ಈ ಸಭೆಯಲ್ಲಿ ಬೂತ್ ಮಟ್ಟದಿಂದಲೂ ಕಾರ್ಯಕರ್ತರು ಒಗ್ಗಟ್ಟಾಗಿ ದುಡಿಯಲು ಮನವಿ ಮಾಡಿ ಕೊಳ್ಳುವ ಮೂಲಕ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರವನ್ನು ತಮ್ಮ ಹಿಡಿತಕ್ಕೆ ತೆಗೆದುಕೊಳ್ಳಲಾಗುವುದು ಎಂದು ಸಿ.ಪಿ.ಯೋಗೇಶ್ವರ್ ಅವರು ತಿಳಿಸಿದರು.

ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ವಿಚಾರವನ್ನು ಕಾರ್ಯಕರ್ತರಿಗೆ ತಿಳಿಸಿ ಅಭಿಪ್ರಾಯ ಪಡೆಯುವ ಹಿನ್ನೆಲೆಯಲ್ಲಿ ಸಭೆ ಕರೆಯಲಾಗಿದ್ದರೂ ಸಭೆಯಲ್ಲಿ ಸಿ.ಪಿ.ಯೋಗೇಶ್ವರ್ ಅವರನ್ನು ಬಿಟ್ಟು ಬೇರೆ ಯಾರಿಗೂ ಮಾತನಾಡಲು ಮತ್ತು ಅಭಿಪ್ರಾಯ ತಿಳಿಸಲು ಅವಕಾಶವಿಲ್ಲದ ಬಗ್ಗೆ ಕೆಲವು ಕಾರ್ಯಕರ್ತರು ಹೊರಗೆ ತಮ್ಮ ಅಸಮಧಾನ ಹೊರಹಾಕಿದ್ದು ಕೇಳಿ ಬಂದಿತು.

ಬಿಜೆಪಿ ಮುಖಂಡರಾದ ಮಲವೇಗೌಡ, ಎಸ್.ಲಿಂಗೇಶ್ ಕುಮಾರ್, ದೇವರಾಜು, ಡಾ.ಲೋಕಾನಂದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪೌರಕಾರ್ಮಿಕರಿಗೆ ಸೀರೆ, ಬಟ್ಟೆ, ಬೆಡ್‌ಶೀಟ್ ಹಾಗೂ ಅನ್ನದಾನ ವಿತರಿಸಿದ ಸಮಾಜ ಸೇವಕ ಶೇಖರ್ ರೆಡ್ಡಿ

# ಪೌರಕಾರ್ಮಿಕರ ಬಗ್ಗೆ ಗೌರವ ಮತ್ತು ಅಭಿಮಾನ ಇರಬೇಕು

**ಬೊಮ್ಮನಹಳ್ಳಿ:** ನಗರದ ಸೌಂದರ್ಯ ಮತ್ತು ನೈರ್ಮಲ್ಯವನ್ನು ಕಾಪಾಡುವ ಪೌರಕಾರ್ಮಿಕರ ಬಗ್ಗೆ ಗೌರವ ಮತ್ತು ಅಭಿಮಾನ ಇರಬೇಕು ಎಂಬುದಾಗಿ ಬಿಜೆಪಿ ಹಿರಿಯ ಮುಖಂಡ ಹಾಗೂ ಸಮಾಜ ಸೇವಕ ಶೇಖರ್ ರೆಡ್ಡಿ ತಿಳಿಸಿದರು.

ಅವರು ಅಗರ ಸಮೀಪದ ಕೈಗೊಂಡನಹಳ್ಳಿಯ ಬಿಜೆಪಿ ಹಿರಿಯ ಮುಖಂಡ ಹಾಗೂ ಸಮಾಜ ಸೇವಕ ಶೇಖರ್ ರೆಡ್ಡಿ ಅವರ ಹುಟ್ಟು ಹಬ್ಬದ ಅಂಗವಾಗಿ ಅಭಿಮಾನಿ ಬಳಗ ಹಾಗೂ ಬಿಜೆಪಿ ಕಾರ್ಯಕರ್ತರು ಹಮ್ಮಿಕೊಂಡಿದ್ದ ವಿವಿಧ ಸಾಮಾಜಿಕ ಸೇವಾಕಾರ್ಯಗಳಿಗೆ ಚಾಲನೆ ನೀಡಿ ಮಾತನಾಡಿದರು

ನಮ್ಮ ಕುಟುಂಬದ ಹಿರಿಯರು



ಗ್ರಾಮದಲ್ಲಿ ದೊಡ್ಡಮನೆತನದವಾಗಿದ್ದರು ಗ್ರಾಮದಲ್ಲಿನ ಯಾವುದೇ ಧಾರ್ಮಿಕ ಹಾಗೂ ಸಾಮಾಜಿಕ ಸೇವಾಕಾರ್ಯಗಳಿಗೆ ಮುಂಚೂಣಿಯಾಗಿ ನಿಂತು ಸೇವೆ ಮಾಡುತ್ತಿದ್ದರು ಅವರು ಹಾಕಿಕೊಟ್ಟ ಮಾರ್ಗವನ್ನು ನಮ್ಮ ತಾತ ಹಾಗೂ ತಂದೆಯವರು ಮುಂದುವರಿಸಿದರು ಇದನ್ನು ನಾನು ಕಾರ್ಯಗತಗೊಳಿಸಲು ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತಿದ್ದಿನಿ ಎಂದರು.

ಇದೇ ಸಂದರ್ಭದಲ್ಲಿ ಶೇಖರ್ ರೆಡ್ಡಿ ಅಭಿಮಾನಿ ಬಳಗದಿಂದ ಸರ್ಕಾರಿ ಶಾಲೆಯ ಮಕ್ಕಳಿಗೆ ಉಚಿತ ಪುಸ್ತಕ ವಿತರಣೆ, ರಸ್ತೆಯ ಪಕ್ಕದಲ್ಲಿ ಗಿಡಗಳನ್ನು ನೆಟ್ಟು ಪೌರಕಾರ್ಮಿಕರ ಸೀರೆ, ಬಟ್ಟೆ, ಬೆಡ್ ಶೀಟ್‌ಗಳನ್ನು ಅನ್ನದಾನ ವಿತರಣೆ ಮಾಡಿದರು.

ಇದೇ ಸಂದರ್ಭದಲ್ಲಿ ಅಗರ ಮಾಜಿ ಬಿಬಿಎಂಪಿ ಸದಸ್ಯೆ ಲತಾನರಸಿಂಹ ಮೂರ್ತಿ, ಮುಖಂಡರಾದ ಕೃಷ್ಣಾರೆಡ್ಡಿ, ಬೊಮ್ಮನಹಳ್ಳಿ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾದ ಅಧ್ಯಕ್ಷ ಪಿ.ಅಂಜಾದ್ ಖಾನ್ ಮಮತಾ ಶೇಖರ್ ರೆಡ್ಡಿ, ಸುಚಿತ್ರಾ ಆಶೋಕ್ ರೆಡ್ಡಿ, ಯುವ ಮುಖಂಡ ಅಭಿ ಶೇಖರ್ ರೆಡ್ಡಿ ಇನ್ನೂ ಮುಂತಾದವರು ಹಾಜರಿದ್ದರು.

# ಹುಯಿಲ್‌ದೊರೆ ಶಾಲೆಯ ವಿದ್ಯಾರ್ಥಿ 100 ಮೀ. ಓಟದಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



**ಶಿರಾ:** ಶಿರಾ ತಾಲೂಕು ಬುಕ್ಕಾಪಟ್ಟಣ ಹೋಬಳಿ ಹುಯಿಲ್ ದೊರೆ ಶ್ರೀ ಶಾರದಾ ಇಂಟರ್ನ್ಯಾಷನಲ್ ಕೇಂಬ್ರಿಡ್ಜ್ ಶಾಲೆಯ ವಿದ್ಯಾರ್ಥಿ ಬಾಲಕರ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಶಾಲೆಯ 10ನೇ ತರಗತಿ ವಿದ್ಯಾರ್ಥಿಯಾದ ಕೋಮಲ್ ಪಾವಗಡದಲ್ಲಿ ನಡೆದ ಮಧುಗಿರಿ ಶೈಕ್ಷಣಿಕ ಜಿಲ್ಲಾಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟದಲ್ಲಿ ಭಾಗವಹಿಸಿ ಬಾಲಕರ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ವಿದ್ಯಾರ್ಥಿಯನ್ನು ಶಾಲೆಯ ಸಂಸ್ಥಾಪಕ ಅಧ್ಯಕ್ಷರಾದ ಜೆ.ರಂಗನಾಥ್, ಕಾರ್ಯದರ್ಶಿ ಬಾಲಕೃಷ್ಣ, ಸೋಮಶೇಖರ್, ಮುಖ್ಯ ಶಿಕ್ಷಕ ನದೀಮ್ ಅಜ್ಮತ್, ದೈಹಿಕ ಶಿಕ್ಷಣ ಶಿಕ್ಷಕರಾದ ಎನ್.ಆರ್ ಕುಮಾರ್, ಕಿರಣ್ ಕುಮಾರ್, ನರಸಿಂಹಮೂರ್ತಿ ಶಾಲೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## ಮೂವತ್ತೂರು ಡ್ಯಾಮ್‌ನಲ್ಲಿ ಶಾಶ್ವತ ನೀರು ಸಂಗ್ರಹಕ್ಕೆ

# 20 ಕೋಟಿ ರೂ. ವೆಚ್ಚದಲ್ಲಿ ಶೀಘ್ರ ಕಾಮಗಾರಿ ಪ್ರಾರಂಭ

**ಕನಕಪುರ:** ತಾಲೂಕಿನ ಕಸಬಾ ಹೋಬಳಿ ಮಾವತ್ತೂರು ಡ್ಯಾಮ್‌ನಲ್ಲಿ ವರ್ಷಪೂರ್ತಿ ಶಾಶ್ವತ ನೀರು ಸಂಗ್ರಹಿಸಲು 20 ಕೋಟಿ ರೂಗಳ ಯೋಜನೆ ರೂಪಿಸಿಕೊಂಡಿದ್ದು, ಮುಂದಿನ ಕೆಲವೇ ತಿಂಗಳಲ್ಲಿ ಕಾಮಗಾರಿ ಪ್ರಾರಂಭವಾಗುವುದಾಗಿ ಸಂಸದ ಡಿ.ಕೆ.ಸುರೇಶ್ ತಿಳಿಸಿದ್ದಾರೆ.

ಭಾನುವಾರ ತಾಲೂಕಿನ ಬೂದುಗುಪ್ಪೆ, ಚಾಕನಹಳ್ಳಿ ಗ್ರಾಪಂ ಕೇಂದ್ರಗಳಲ್ಲಿ ಜನ ಸಂಪರ್ಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಗ್ರಾಮಸ್ಥರು ನಾಲೆ ದುರಸ್ತಿ, ಮಾವತ್ತೂರು ಡ್ಯಾಮ್‌ನಲ್ಲಿ ನೀರು ಸಂಗ್ರಹಣೆ, ಕಾಡುಪ್ರಾಣಿಗಳಿಂದ ಆಗುತ್ತಿರುವ ತೊಂದರೆ ಬಗ್ಗೆ ಅವಹಾಲುಗಳನ್ನು ನೀಡಿದ್ದಾರೆ. ಈ ಭಾಗದ ರೈತರು ಅಂತರ್ಜಲ ಕುಸಿದಿದ್ದು ಬೆಳಗ್ಗೆ ನೀರಿಲ್ಲವೆಂದು ತಿಳಿಸಿದ್ದಾರೆ, ಇದಕ್ಕಾಗಿ ಮಾವತ್ತೂರು ಕೆರೆ ತುಂಬಿಸಲು 20 ಕೋಟಿ ವೆಚ್ಚದಲ್ಲಿ ಕಾಮಗಾರಿ ಪ್ರಾರಂಭವಾಗಲಿದೆ. ತುಂಗಣಿ, ಬೂದುಗುಪ್ಪೆ ಹಾಗೂ ಆನೇಕಲ್‌ನಿಂದ ಈ ಕೆರೆಗೆ ನೀರು ಹರಿಸುವುದರ ಮೂಲಕ ನಿಮ್ಮ ವಿಶ್ವಾಸ ಉಳಿಸಿಕೊಳ್ಳುವುದಾಗಿ ಭರವಸೆ ನೀಡಿದರು.

ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಐದು ಗ್ಯಾರಂಟಿಗಳನ್ನು ನೀಡಿತ್ತು, ಅಂತಹ ಎಲ್ಲಾ ಗ್ಯಾರಂಟಿಗಳನ್ನು ರಾಜ್ಯ ಸರ್ಕಾರ ತಂದೆ ತೀರುವುದಾಗಿ ತಿಳಿಸಿ, ಕೆಲವು ತಾಂತ್ರಿಕ ದೋಷಗಳಿಂದಾಗಿ ಗೃಹಲಕ್ಷ್ಮಿ ಹಾಗೂ ಪಡಿತರದಾರರಿಗೆ ಹಣ ಸಂದಾಯವಾಗಿಲ್ಲ. ಸಂಬಂಧಿಸಿದ ಇಲಾಖೆಯವರು



ಎಲ್ಲಾ ತಾಂತ್ರಿಕ ದೋಷವನ್ನು ಸರಿಪಡಿಸಿಕೊಂಡು ಹಣ ಬಿಡುಗಡೆ ಮಾಡಲಿರುವುದಾಗಿ ಹೇಳಿದರು.

ವಿಧಾನಪರಿಷತ್ ಸದಸ್ಯ ಎಸ್.ರವಿ, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಎಂ.ಡಿ.ವಿಜಯದೇವ್, ತೆಂಗು ಹಾಗೂ ನಾರು ಮಂಡಳಿ ಮಾಜಿ ಅಧ್ಯಕ್ಷ ಡಿ.ಎಂ.ವಿಶ್ವನಾಥ್, ಬಿಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ನಾರಾಯಣಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಕೃಷ್ಣಮೂರ್ತಿ, ಮಾಜಿ ಅಧ್ಯಕ್ಷ ಕೆ.ಎನ್.ದಿಲೀಪ್, ಬೂದಗುಪ್ಪೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಕ್ಷ್ಮೀಬಾಯಿ, ಉಪಾಧ್ಯಕ್ಷೆ ಪದ್ಮಮ್ಮ, ಚಾಕನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪ್ರಮೀಳಾ, ಉಪಾಧ್ಯಕ್ಷ ಗಂಗರಾಜು, ತಹಸಿಲ್ದಾರ್ ಡಾ.ಸ್ಮಿತಾರಾಮು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಭೈರಪ್ಪ, ಲೋಕೋಪಯೋಗಿ ಇಲಾಖೆ ಎಇಇ ಟಿ.ಟಿ.ಮೂರ್ತಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ವಿವಿಧ ಯೋಜನೆಗಳ ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತದಿಂದ 2023–24ನೇ ಸಾಲಿಗೆ ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಅರಿವು –ಶೈಕ್ಷಣಿಕ ನೇರ ಸಾಲ ಯೋಜನೆ (ಹೊಸತು), ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಆರ್ಥಿಕ ನೆರವು, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್ ಗಳ ಸಹಯೋಗದೊಂದಿಗೆ), ಮತ್ತು ಸ್ವಾವಲಂಬಿ ಸಾರಥಿ ಯೋಜನೆಗೆ ಸಹಾಯಧನ ಪಡೆಯಲು ಅಲೆಮಾರಿ ನಿಗಮಕ್ಕೆ ಸೇರಿದ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ಕರ್ನಾಟಕ ರಾಜ್ಯ ಖಾಯಂ ನಿವಾಸಿಯಾಗಿರಬೇಕು, ಅಲೆಮಾರಿ ಮತ್ತು ಅರೆ ಅಲೆಮಾರಿ ಹಾಗೂ ಉಪಜಾತಿಗಳಿಗೆ ಸೇರಿರಬೇಕು, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ, ವಯೋಮಿತಿ 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು, ಅರ್ಜಿಗಳನ್ನು ಸೇವ ಸಿಂಧು ಪೋರ್ಟಲ್ ಮೂಲಕ ನವೆಂಬರ್ 03 ರೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ, ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಬೆಂಗಳೂರು ಉತ್ತರ ಜಿಲ್ಲೆ, ನಂ.324/62, ಸರ್ವಶೀಲಾ ಕಾಂಪ್ಲೆಕ್ಸ್, ಬಳ್ಳಾರಿ ಮೈನ್ ರೋಡ್, ಗಂಗಾನಗರ, ಬೆಂಗಳೂರು ಅಥವಾ ನಿಗಮದ ವೆಬ್ ಸೈಟ್ : www.kaad.karnataka.gov.in ರಲ್ಲಿ ಅಥವಾ ನಿಗಮದ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ: 080–22374832, 8050770004, 8050770005 ಮೂಲಕ ಹಾಗೂ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಉತ್ತರ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆ: 080–23539600/ 23539601 ಗೆ ಸಂಪರ್ಕಿಸಬಹುದು ಎಂದು ಬೆಂಗಳೂರು ಉತ್ತರ ಜಿಲ್ಲೆಯ ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಣಿಗಲ್‌ನಲ್ಲಿ ಜನತಾ ದರ್ಶನಾ ಸಾವಿರಕ್ಕೂ ಅಧಿಕ ಅರ್ಜಿ ಸಲ್ಲಿಕೆ

## ಜನತಾ ದರ್ಶನಾ ಸದ್ಬಳಕ್ಕೆಗೆ ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್ ಮನವಿ

**ಕುಣಿಗಲ್ :** ಕುಣಿಗಲ್ ಪಟ್ಟಣದಲ್ಲಿ ಸಾರ್ವಜನಿಕರ ಸಮಸ್ಯೆ ಆಲಿಕೆಗೆ ವೇದಿಕೆಯಾಗಿದ್ದ ಜನತಾ ದರ್ಶನ ಕಾರ್ಯಕ್ರಮದಲ್ಲಿ ನಿರೀಕ್ಷೆಗೂ ಮೀರಿ ಜನರು ಹತ್ತಾರು ಸಮಸ್ಯೆಗಳನ್ನು ಹೊತ್ತು ತಂದು ಅರ್ಜಿಗಳನ್ನು ಸಲ್ಲಿಸಿದ್ದು, ಇದಕ್ಕೆ ನಾಗರೀಕರಿಂದ ಉತ್ತಮ ಸ್ಪಂದನೆ ಸಿಕ್ಕಿತು.

ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ವತಿಯಿಂದ ಪಟ್ಟಣದ ದಿವ್ಯ ಕಲ್ಯಾಣ ಮಂಟಪದಲ್ಲಿ ನಡೆದ ಜನತಾ ದರ್ಶನ ಕಾರ್ಯಕ್ರಮದ ಸಾವಿರಕ್ಕೂ ಅಧಿಕ ಅರ್ಜಿ ಸಲ್ಲಿಕೆಯಾಗಿದ್ದು ಸ್ಥಳದಲ್ಲಿಯೇ ಹಲವು ಅರ್ಜಿಗಳನ್ನು ಇತ್ಯಾರ್ಥ ಪಡಿಸಲಾಯಿತು,

ಅರ್ಜಿ ವಿಲೇವಾರಿಗೆ ಸೂಚನೆ : ಶಾಸಕ ಡಾ.ಹೆಚ್.ಡಿ.ರಂಗನಾಥ್ ಮಾತನಾಡಿ ಜನತಾ ದರ್ಶನದಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಶೀಘ್ರದಲ್ಲೇ ಅದ್ಯತೆ ಮೇರೆಗೆ ವಿಲೇವಾರಿ ಮಾಡಿ ಜನರಿಗೆ ಅನುಕೂಲ ಮಾಡಿಕೊಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

12 ಕೌಂಟರ್‌ನಲ್ಲಿ ಅರ್ಜಿ ಸಲ್ಲಿಕೆ : ನಿವೇಶನ, ವಸತಿ, ಗೃಹ ಲಕ್ಷ್ಮಿ, ಕಂದಾಯ, ಬೆಸ್ಕಾಂ, ಪುರಸಭೆ ಸೇರಿದಂತೆ ವಿವಿಧ ಇಲಾಖೆಗೆ ಸಂಬಂಧಿಸಿದಂತೆ ಸಾವಿರಕ್ಕೂ ಅಧಿಕ ಅರ್ಜಿ ಸಲ್ಲಿಕೆಯಾಗಿದೆ ಎಂದು ಶಾಸಕರು ತಿಳಿಸಿದರು, ಅರ್ಜಿ ಸ್ವೀಕರಕ್ಕೆ 12 ಕೌಂಟರ್‌ಗಳನ್ನು ಇದಕ್ಕಾಗಿ ತೆರೆಯಲಾಗಿದೆ ಸಾರ್ವಜನಿಕರು ತಮ್ಮ ಸಮಸ್ಯೆಗೆ ಸಂಬಂಧಿಸಿದಂತೆ ಅರ್ಜಿಗಳನ್ನು ಸಲ್ಲಿಸುವಂತೆ ತಿಳಿಸಿದರು,





ಕಟ್ಟ ಕಡೆಯ ವ್ಯಕ್ತಿಗೆ ಸೌಲಭ್ಯ : ಸಂವಿಧಾನದ ಆಶಯದಂತೆ ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ಸರ್ಕಾರದ ಯೋಜನೆಗಳ ಲಾಭ ದೊರಕಿಸಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ದಿಸೆಯಲ್ಲಿ ಸರ್ಕಾರ ವಿನೂತನ ಜನತಾ ದರ್ಶನ ಕಾರ್ಯಕ್ರಮ ಜಾರಿಗೆ ತರುವ ಮೂಲಕ ದಿಟ್ಟ ಹೆಜ್ಜೆ ಇಟ್ಟಿದೆ ಎಂದು ತಿಳಿಸಿದ ಶಾಸಕರು, ಜನತಾ ದರ್ಶನ ಕಾರ್ಯಕ್ರಮವನ್ನು ಪ್ರತಿಯೊಬ್ಬರು ಸದ್ಬಳಕ್ಕೆ ಮಾಡಿಕೊಂಡು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕೆಂದು ಹೇಳಿದರು,

ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್ ಮಾತನಾಡಿ ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಕಚೇರಿಗಳಿಗೆ ಅಲೆದಾಟವನ್ನು ತಪ್ಪಿಸಿ ಒಂದೇ ವೇದಿಕೆಯಲ್ಲಿ ಸಮಸ್ಯೆಗೆ ಪರಿಹಾರ ಪಡೆಯುವ ದಿಸೆಯಲ್ಲಿ ಪ್ರತಿ ತಿಂಗಳು ಜಿಲ್ಲಾ ಮಟ್ಟದಲ್ಲಿ ನಡೆಯುವ ಜನತಾ ದರ್ಶನದಲ್ಲಿ ಹೆಚ್ಚಿನ ಜನರು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು, ಗ್ರಾಮ ಮಟ್ಟದ ಸಮಸ್ಯೆಗಳಿಗೆ ಸ್ಥಳೀಯ ಮಟ್ಟದಲ್ಲಿಯೇ ಪರಿಹಾರ ಕಲ್ಪಿಸಲು ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ, ಜಿಲ್ಲಾ ಮಟ್ಟದಲ್ಲಿ ಇತ್ಯಾರ್ಥವಾಗಬೇಕಾದ ಸಮಸ್ಯೆ ದೂರುಗಳನ್ನು ಜಿಲ್ಲಾ ಹಂತದಲ್ಲಿಯೇ ಬಗೆಹರಿಸುವ ನಿಟ್ಟಿನಲ್ಲಿ ಜನತಾ ದರ್ಶನ ಅತ್ಯಂತ ಸೂಕ್ತವಾದ ಕಾರ್ಯಕ್ರಮವಾಗಿದೆ, ಜನರ ಹಲವು ಸಮಸ್ಯೆಗಳನ್ನು ಬಗೆಹರಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ, ಜನತಾ ದರ್ಶನದಲ್ಲಿ ಸ್ವೀಕೃತವಾಗುವ ಅರ್ಜಿಗಳಿಗೆ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂಧಿಸಿ ಪರಿಹಾರ ಕಲ್ಪಿಸಲು ಪ್ರಯತ್ನಿಸಲಿದ್ದಾರೆ, ಅರ್ಜಿ ಸ್ವೀಕರಿಸಿ ದಿನದಿಂದ 30 ದಿನದ ಒಳಗೆ ಸಮಸ್ಯೆ ಪರಿಹಾರಕ್ಕೆ ಕ್ರಮಕೈಗೊಳ್ಳಲಾಗುವುದು ಇಲ್ಲವಾದಲ್ಲಿ ಹಿಂಬರಹ ನೀಡಲಾಗುವುದೆಂದು ಹೇಳಿದರು,

ನಿವೇಶನಕ್ಕೆ ಕ್ರಮ : ಅಮೃತೂರಿನಿಂದ ಆಗಮಿಸಿದ ಮಹಿಳೆಯರು ಸರ್ಕಾರಿ ಜಾಗದಲ್ಲಿ ಗುಡಿಸಲು ಹಾಕಿಕೊಂಡು ಹತ್ತಾರು ವರ್ಷದಿಂದ ವಾಸವಾಗಿದ್ದೇವೆ ಹಾಗಾಗಿ ಹಕ್ಕು ಪತ್ರವನ್ನು ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು, ಸರ್ಕಾರಿ ಜಾಗದಲ್ಲಿ ಗುಡಿಸಲು ಹಾಕಿಕೊಳ್ಳುವುದು ಸರಿಯಲ್ಲ, ಈ ಸಂಬಂಧ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ, ಅರ್ಹ ಫಲಾನುಭವಿಗಳನ್ನು ಗುರುತಿಸಿ ನಿವೇಶನ ಕೊಡುವ ಸಂಬಂಧ ಕ್ರಮಕೈಗೊಳ್ಳುವುದ್ದಾಗಿ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿ.ಪಂ ಮುಖ್ಯಕಾರ್ಯನಿರ್ವಾಣಾಧಿಕಾರಿ ಜಿ.ಪ್ರಭು ಮಾತನಾಡಿ ಸರ್ಕಾರಿ ವಿವಿಧ ಇಲಾಖೆಗಳಿಗೆ ನಿತ್ಯ ನೂರಾರು ದೂರುಗಳು ಬರುತ್ತವೆ, ಇಲಾಖೆಗಳಲ್ಲಿನ ಹಲವು ಸೇವೆ ಸಮಸ್ಯೆಗಳಿಗೆ ಸ್ಪಂಧಿಸಿ ನಿಗಧಿತ ಅವಧಿಯಲ್ಲಿ ಜನರಿಗೆ ಸೇವೆ ತಲುಪಿಸಲು ಜನತಾ ದರ್ಶನ ಕಾರ್ಯಕ್ರಮ ಅತ್ಯಪಯುಕ್ತವಾಗಿದೆ

**ಬೀಡು ಬಿಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು** : ಸೋಮವಾರ ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್, ಜಿ.ಪಂ ಸಿಇಓ ಜಿ.ಪ್ರಭು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇಡೀ ದಿನ ಕುಣಿಗಲ್ ನಲ್ಲೇ ಬೀಳು ಬಿಟ್ಟು ಅಧಿಕಾರಿಗಳ ಸರಣಿ ಸಭೆಗಳನ್ನು ನಡೆಸಿದರು, ತಾಲೂಕಿನ ಸಮಸ್ಯೆಗಳ ಬಗ್ಗೆ ಚರ್ಚಿಸಿದರು, ಜನತಾ ದರ್ಶನ ಕಾರ್ಯಕ್ರಮದ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಇಲ್ಲಿನ ದಿವ್ಯ ಕಲ್ಯಾಣ ಮಂಟಪದಲ್ಲಿ ಕೌಂಟರ್ ಗಳನ್ನು ಪ್ರಾರಂಭಿಸಿ ಬೆಳಗ್ಗೆಯಿಂದಲ್ಲೇ ಸಾರ್ವಜನಿಕರಿಂದ ಅರ್ಜಿಯನ್ನು ಸ್ವೀಕರಿಸಿದರು, ಸಭೆಗೆ ಆಗಮಿಸಿದ ಡೀಸಿ, ಸಿಇಓ ಹಾಗೂ ಶಾಸಕರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ 45 ನಿಮಿಷದಲ್ಲಿ ಕಾರ್ಯಕ್ರಮ ಮುಗಿಸಿದರು.

ಈ ವೇಳೆ ಉಪವಿಭಾಗಾಧಿಕಾರಿ ಗೌರವ ಕುಮಾರ್‌ಶೆಟ್ಟಿ, ಡಿವೈಎಸ್‌ಪಿ ಲಕ್ಷ್ಮಿಕಾಂತ್, ಡಿಹೆಚ್‌ಓ ಡಾ.ಮಂಜುನಾಥ್, ಸಿಪಿಐ ನವೀನ್‌ಗೌಡ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಪ್ಪ ಮತ್ತಿತರರು ಇದ್ದರು.

# ಚಿರತೆ ಸೆರೆ: ನಿಟ್ಟುಸಿರು ಬಿಟ್ಟ ಗ್ರಾಮಸ್ಥರು



**ಕನಕಪುರ :** ಹಾರೋಹಳ್ಳಿ ತಾಲ್ಲೂಕಿನ ಸಾರ್ವಜನಿಕರ ಸಾಕು ಪ್ರಾಣಿಗಳ ಮೇಲೆ ನಿರಂತರವಾಗಿ ದಾಳಿ ಮಾಡುತ್ತಿದ್ದ ಚಿರತೆಯನ್ನು ಸೆರೆ ಹಿಡಿಯುವಲ್ಲಿ ಅರಣ್ಯಾಧಿಕಾರಿಗಳು ಯಶಸ್ವಿಯಾಗಿದ್ದಾರೆ.

ಹಾರೋಹಳ್ಳಿ ಹೋಬಳಿಯ ಮಾರಸಂದ್ರ ಆಗರ, ಪಡುವಣಗೆರೆ, ದೊಡ್ಡಸಾದೇನಹಳ್ಳಿ ಗ್ರಾಮಗಳಲ್ಲಿ ಸುಮಾರು ಮೂರು ತಿಂಗಳುಗಳಿಂದ ಕುರಿ ಮೇಕೆ ಹಸುಗಳು ಹಾಗೂ ಇನ್ನಿತರೆ ಸಾಕು ಪ್ರಾಣಿಗಳ ಮೇಲೆ ನಿರಂತರವಾಗಿ ದಾಳಿ ಮಾಡುತ್ತಿದ್ದು ಗ್ರಾಮಸ್ಥರು ಕಂಗಾಲಾಗಿದ್ದರು.

ಸಾರ್ವಜನಿಕರು ಅರಣ್ಯ ಇಲಾಖೆಗೆ ನೀಡಿದ ದೂರಿನನ್ವಯ ನೆನ್ನೆ ರಾತ್ರಿ ಮಾರಸಂದ್ರ ಗ್ರಾಮದ ಸರ್ವೆ ನಂಬರ್ 49ರ ಸಿದ್ದೇಗೌಡರ ಜಮೀನಿನಲ್ಲಿ ಇಟ್ಟಿದ್ದ ಬೋನಿಗೆ ಚಿರತೆ ಸೆರೆಯಾಗಿರುವುದನ್ನು ಕಂಡು ಗ್ರಾಮಸ್ಥರು ನಿಟ್ಟುಸಿರು ಬಿಟ್ಟಿದ್ದಾರೆ. ಸುತ್ತ ಮುತ್ತಲ ಗ್ರಾಮಗಳಲ್ಲಿ ಸುಮಾರು ಮೂರು ತಿಂಗಳುಗಳಿಂದ ಮೂವತ್ತಕ್ಕೂ ಹೆಚ್ಚು ಜಾನುವಾರುಗಳನ್ನು ತಿಂದು ಹಾಕಿದ್ದು ಗ್ರಾಮಸ್ಥರಲ್ಲಿ ಆತಂಕ ಮನೆಮಾಡಿತ್ತು.

ಕಾರ್ಯಾಚರಣೆಯನ್ನು ರಾಮನಗರ ಪ್ರಾದೇಶಿಕ ವಿಭಾಗದ ಉಪ ವಲಯ ಸಂರಣ್ಯಾಧಿಕಾರಿ ಎಂ ರಾಮಕೃಷ್ಣಪ್ಪ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವಿ ಗಣೇಶ್ ಮಾರ್ಗದರ್ಶನದಲ್ಲಿ ಕನಕಪುರ ವಲಯ ಅರಣ್ಯಾಧಿಕಾರಿ ಎ ಎಲ್ ದಾಳೇಶ್ ನೇತೃತ್ವದಲ್ಲಿ ಉಪ ವಲಯ ಅರಣ್ಯಾಧಿಕಾರಿ ರಮೇಶ್ ಮ ಯಂಕಂಚಿ ಟಿ ಬಿ ಶಿವಕುಮಾರ್, ಚಂದ್ರಾನಾಯ್ಕ್, ಎ. ಎಸ್ ಹಾಗೂ ಗಸ್ತು ಅರಣ್ಯ ಪಾಲಕರಾದ ಶಿವರಾಜ್ ವಿ. ಲೋಕೇಶ್, ಮಂಜುನಾಥ್ ಎನ್. ಮಲ್ಲಿಕಾರ್ಜುನ್ ಪಿ ಬೇನಾಳ್ ಹಾಗೂ ವಲಯದ ಎಲ್ಲಾ ಸಿಬ್ಬಂದಿಗಳು ಚಿರತೆಯನ್ನು ಸೆರೆ ಹಿಡಿಯುವ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.